# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 931
2. ಮಾನ್ಯ ಸದಸ್ಯರ ಹೆಸರು : ಡಾ.ಎಂ.ಜಿ ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 17.12.2024
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನ ಹಳ್ಳಿಕೇಡ ಗ್ರಾಮದಲ್ಲಿರುವ ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಮುಚ್ಚಲ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಕ್ಕರೆ ಕಾರ್ಖಾನೆ ಮುಚ್ಚಲು ಕಾರಣವೇನು? | ಬಂದಿದೆ.<br>ಆರ್ಥಿಕ ಸಂಕಷ್ಟದಿಂದಾಗಿ ದುಡಿಯುವ ಬಂಡವಾಳದ ಕೊರತೆ ಮತ್ತು ಇತರೆ ಆಡಳಿತಾತ್ಮಕ ಕಾರಣಗಳ ಹಿನ್ನೆಲೆಯಲ್ಲಿ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ, ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬಾಗಲಕೋಟೆ ಜಿಲ್ಲೆ- ಈ ಕಾರ್ಖಾನೆಯಲ್ಲಿ 2021-22ನೇ ಸಾಲಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿರುತ್ತದೆ. |
| (ಆ) | ಈ ಸಕ್ಕರೆ ಕಾರ್ಖಾನೆಯನ್ನು ಮುಚ್ಚಿರುವುದರಿಂದ ಸ್ಥಳೀಯ ರೈತರಿಗೆ ಅನಾನುಕೂಲವಾಗುದಿಲ್ಲವೇ; | ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ, ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬಾಗಲಕೋಟೆ ಜಿಲ್ಲೆ - ಈ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ, ಈ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರದಲ್ಲಿ ಕಬ್ಬು ಬೆಳೆದ ಕಬ್ಬನ್ನು ಸಮೀಪದ ಸಕ್ಕರೆ ಕಾರ್ಖಾನೆಗಳಿಗೆ ಸಾಗಾಣಿಕೆ ಮಾಡಲು ಅವಕಾಶವಿರುತ್ತದೆ. |
| (ಇ) | ಈ ಸಕ್ಕರೆ ಕಾರ್ಖಾನೆಯನ್ನು ಪುನಃ ಪ್ರಾರಂಭಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು; ಹಾಗೂ ಯಾವ ಕಾಲಮಿತಿಯಲ್ಲಿ ಈ ಸಕ್ಕರೆ ಕಾರ್ಖಾನೆಯನ್ನು ಪುನಾರಾರಂಭಿಸಲಾಗುವುದು? | ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯ 2021-22ನೇ ಸಾಲಿನಿಂದ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಆರ್ಥಿಕ ಸಂಕಷ್ಟದಲ್ಲಿರುವ ಬೀದರ್ ಸಹಕಾರ ಕಾರ್ಖಾನೆಯನ್ನು Lease Rehabilitate Operate Transfer (ಎಲ್.ಆರ್ .ಓ.ಟಿ) ಆಧಾರದ ಮೇಲೆ ದೀರ್ಘಾವಧಿಗೆ ಖಾಸಗಿಯವರಿಗೆ ಗುತ್ತಿಗೆ ನೀಡುವ ಮೂಲಕ ಪುನಶ್ಚೇತನಗೊಳಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಸಿಐ 107 ಸಿಓಎಫ್ 2022 (ಭಾಗ-3) ದಿನಾಂಕ: 10.01.2023 ರಲ್ಲಿ ಅನುಮತಿಸಲಾಗಿತ್ತು. ಅದರಂತೆ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯ ವತಿಯಿಂದ ಹೊರಡಿಸಲಾಗಿದ್ದ ಟೆಂಡರ್ ಪ್ರಕಟಣೆಯನ್ವಯ ದಿನಾಂಕ:09.03.2023 ರಂದು ಆಸಕ್ತ ಬಿಡುದಾರರೊಂದಿಗೆ ಪ್ರಿ-ಬಿಡ್ ಸಭೆಯನ್ನು ನಡೆಸಲಾಗಿರುತ್ತದೆ.<br>ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯ ಸಾಲಗಳನ್ನು ಓ.ಟಿ.ಎಸ್ ಮೂಲಕ ತೀರುವಳಿ ಮಾಡುವ ಅವಕಾಶವನ್ನು ಸೇರಿದಂತೆ ಟೆಂಡರ್ ಷರತ್ತು ಮತ್ತು ನಿಬಂಧನೆಗಳಲ್ಲಿ ಕೆಲವು ತಿದ್ದುಪಡಿ ಬದಲಾವಣೆಗಳನ್ನು ಮಾಡಲು ಪ್ರಿ-ಬಿಡ್ ಸಭೆಯಲ್ಲಿ ಭಾಗವಹಿಸಿದ್ದ ಆಸಕ್ತ ಬಿಡ್ಡುದಾರರು ಕೋರಿದ್ದರು. |

| | | |
|---|---|---|
| | | ಅದರಂತೆ, ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗೆ ಸಾಲ ನೀಡಿರುವ ಬ್ಯಾಂಕುಗಳು / ಹಣಕಾಸು ಸಂಸ್ಥೆಗಳೊಂದಿಗೆ ಸಭೆಯನ್ನು ಜರುಗಿಸಿ ಸಾಲ ನೀಡಿರುವ ಬ್ಯಾಂಕುಗಳು / ಹಣಕಾಸು ಸಂಸ್ಥೆಗಳು ಅಂತಿಮವಾಗಿ ಎಷ್ಟು ಓ.ಟಿ.ಎಸ್ ಮೊತ್ತಕ್ಕೆ ಒಪ್ಪುತ್ತವೆ ಎಂಬ ಬಗ್ಗೆ ಅಭಿಪ್ರಾಯ / ಸಹಮತಿಯನ್ನು ಪಡೆದು ಟೆಂಡರ್ ಡಾಕ್ಯುಮೆಂಟಿನ ಷರತ್ತು ಮತ್ತು ನಿಬಂಧನೆಗಳನ್ನು ಬದಲಾವಣೆ / ತಿದ್ದುಪಡಿ ಮಾಡುವ ಕುರಿತು ಪರಿಷ್ಕೃತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಸಿಐ 107 ಸಿಓಎಫ್ 2022 (ಭಾಗ-3), ದಿನಾಂಕ:05.09.2023, 12.03.2024, 28.06.2024ರ ಪತ್ರಗಳಲ್ಲಿ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರಿಗೆ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ., ಹಳ್ಳಿಖೇಡ್, ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ ಇವರಿಗೆ ತಿಳಿಸಲಾಗಿತ್ತು.<br>ಕಾರ್ಖಾನೆಯು ಹೊಂದಿರುವ ಬ್ಯಾಂಕುಗಳ ಸಾಲಗಳ ಮೇಲಿನ ಬಡ್ಡಿಯನ್ನು ಸರ್ಕಾರದ ಹಂತದಲ್ಲಿಯೇ ಮನ್ನಾ ಮಾಡುವಂತೆ ಹಾಗೂ ಕಬ್ಬು ಬೆಳೆಗಾರ ರೈತರು ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಗುತ್ತಿಗೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಕಾರ್ಖಾನೆಯನ್ನು ಪ್ರಾರಂಭಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ಇವರು ಕೋರಿದ್ದು, ಈ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ದಿನಾಂಕ:10.09.2024ರ ಪತ್ರದಲ್ಲಿ ಕೋರಿದ್ದರು.<br>ಏಕತೀರುವಳಿ ಯೋಜನೆ ಅಡಿಯಲ್ಲಿ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವಂತೆ ಬೀದರ್ ಡಿ.ಸಿ.ಸಿ ಬ್ಯಾಂಕ್ ನಿ., ಇವರನ್ನು ಕೋರಿದ್ದು, ಬೀದರ್ ಡಿ.ಸಿ.ಸಿ ಬ್ಯಾಂಕ್‌ನಿಂದ ಇದುವರೆವಿಗೂ ಯಾವುದೇ ಉತ್ತರ ಬಂದಿರುವುದಿಲ್ಲ. ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗೆ ಸಾಲ ನೀಡಿರುವ ಬ್ಯಾಂಕುಗಳು / ಹಣಕಾಸು ಸಂಸ್ಥೆಗಳೊಂದಿಗೆ ಸಭೆಯನ್ನು ಜರುಗಿಸಿ ಸಾಲ ನೀಡಿರುವ ಬ್ಯಾಂಕುಗಳು / ಹಣಕಾಸು ಸಂಸ್ಥೆಗಳು ಅಂತಿಮವಾಗಿ ಎಷ್ಟು ಓ.ಟಿ.ಎಸ್ ಮೊತ್ತಕ್ಕೆ ಒಪ್ಪುತ್ತವೆ ಎಂಬ ಬಗ್ಗೆ ಅಭಿಪ್ರಾಯ / ಸಹಮತಿಯನ್ನು ಪಡೆದು ಟೆಂಡರ್ ಡಾಕ್ಯುಮೆಂಟಿನ ಷರತ್ತು ಮತ್ತು ನಿಬಂಧನೆಗಳನ್ನು ಬದಲಾವಣೆ / ತಿದ್ದುಪಡಿ ಮಾಡುವ ಕುರಿತು ಪರಿಷ್ಕೃತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ:ಸಿಐ 107 ಸಿಓಎಫ್ 2022 (ಭಾಗ-3), ದಿನಾಂಕ:04.12.2024ರ ಪತ್ರದಲ್ಲಿ, ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರಿಗೆ ತಿಳಿಲಾಗಿದೆ. ಪ್ರಸ್ತಾವನೆಯನ್ನು ನಿರೀಕ್ಷಿಸಲಾಗಿದೆ. |

**ಸಂಖ್ಯೆ:** ಸಿಐ 404 ಸಿಓಎಫ್ 2024

**(ಶಿವಾನಂದ ಎಸ್ ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು